ನಿಗದಿಪಡಿಸಿರುವ ಪ್ರಮಾಣಕ್ಕಿಂತ ಕಡಿಮೆ ಪಡಿತರವನ್ನು ವಿತರಣೆ ಮಾಡುತ್ತಿರುವುದು

210(243); ಶ್ರೀ ರಾಜೀವ್ ಪಿ. (ಕುಡಚಿ)

ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಕುಡಚಿ ಮತಕ್ಷೇತ್ರದಲ್ಲಿ ಸರ್ಕಾರ ನಿಗದಿಪಡಿಸಿರುವ ಪ್ರಮಾಣಕ್ಕಿಂತ ಕಡಿಮೆ ಪ್ರಮಾಣದ ಪಡಿತರವನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ತಿಂಗಳಲ್ಲಿ 2 ರಿಂದ 3 ದಿನ ಪಡಿತರ ಹಂಚಿಕೆ ಮಾಡಿ ಉಳಿದ ದಿನಗಳು ಮುಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಇದರಿಂದ ಸಾಮಾನ್ಯ ಜನರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಕಡಿಮೆ ಪಡಿತರ ನೀಡಿರುವ ಪಡಿತರ ಅಂಗಡಿಯವರು ಮತ್ತು ಇದಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ?

ಶ್ರೀ ದಿನೇಶ್ ಗುಂಡೂರಾವ್ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಸಚಿವರು)

ಅ) ರಾಯಭಾಗ ತಾಲ್ಲೂಕಿನ ಕುಡಚಿ ಮತಕ್ಷೇತ್ರದಲ್ಲಿ ಸರ್ಕಾರ ನಿಗದಿಪಡಿಸಿರುವ ಪ್ರಮಾಣಕ್ಕಿಂತ ಕಡಿಮೆ ಪ್ರಮಾಣದ ಪಡಿತರವನ್ನು ವಿತರಿಸುತ್ತಿರುವ ಯಾವುದೇ ಪ್ರಮಾಣಗಳು ಕಂಡು ಬಂದಿರುವುದಿಲ್ಲ.

ಆ) "ಪಡಿತರ ಖಾತರಿ" ಯೋಜನೆಯನುಸಾರ ಪ್ರತಿ ತಿಂಗಳು ಎಲ್ಲಾ ದಿನಗಳಲ್ಲಿ ಪಡಿತರ ಚೀಟಿದಾರರಿಗೆ ನ್ಯಾಯಬೆಲೆ ಅಂಗಡಿಯವರು ನಿಗದಿತ ಪ್ರಮಾಣದಲ್ಲಿ ಆಹಾರಧಾನ್ಯ ವಿತರಿಸುತ್ತಿದ್ದಾರೆ.

ಇ) ಅನ್ವಯಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.